**ಕರ್ನಾಟಕ ಸರ್ಕಾರ**
**ಸಹಕಾರ ಚುನಾವಣಾ ಆಯೋಗ**

ವಿಷಯ:- ದಿನಾಂಕ:31.03.2014ಕ್ಕೆ ಮಂಡಲಿಗಳ ಪದಾವಧಿ ಮುಗಿಯಲಿರುವ ಫೆಡರಲ್ ಸಹಕಾರ ಸಂಘಗಳ ಆಡಳಿತ ಮಂಡಲಿ ಹಾಗೂ ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಗಳ ನೇಮಕ ಮಾಡುವ ಕುರಿತು.

***

**ಪ್ರಸ್ತಾವನೆ:-**

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959ರ (ಸಂಕ್ಷಿಪ್ತವಾಗಿ 'ಅಧಿನಿಯಮ') ಪ್ರಕರಣ 39-ಎ ಹಾಗೂ ಪ್ರಕರಣ 39-ಎಎ ದ ಅವಕಾಶದಂತೆ ಯಾವುದೇ ಆಕಸ್ಮಿಕ ಖಾಲಿ ಸ್ಥಾನವನ್ನು ಒಳಗೊಂಡಂತೆ ಸಹಕಾರ ಸಂಘದ ಮಂಡಲಿಯ ಸದಸ್ಯರ ಪ್ರತಿಯೊಂದು ಸಾಮಾನ್ಯ ಚುನಾವಣೆಯನ್ನು ಮತ್ತು ಪದಾಧಿಕಾರಿಗಳ ಚುನಾವಣೆಯನ್ನು ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ, ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಡೆಸತಕ್ಕದ್ದಾಗಿದೆ. ಮೇಲೆ ತಿಳಿಸಿದಂತೆ ಸಹಕಾರ ಸಂಘದ ಮಂಡಲಿ ಚುನಾವಣೆಗಳನ್ನು / ಪದಾಧಿಕಾರಿಗಳ ಚುನಾವಣೆಗಳನ್ನು ಸದರಿ ಅಧಿನಿಯಮ / ನಿಯಮಗಳು ಹಾಗೂ ಸಂಘಗಳ ಉಪವಿಧಿಗಳನ್ನು ಗಮನದಲ್ಲಿಟ್ಟುಕೊಂಡು ಕಾನೂನಿಗೆ ಅನುಗುಣವಾಗಿ ನಡೆಸತಕ್ಕದ್ದಾಗಿದೆ. 2014ರ ಮಾರ್ಚ್‌ಗೆ ಅವಧಿ ಮುಗಿಯಲಿರುವ ಫೆಡರಲ್ ಸಹಕಾರ ಸಂಘಗಳ ಮಂಡಲಿ ಚುನಾವಣೆಗಳು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ಅಧಿನಿಯಮ ಪ್ರಕರಣ 39ಎ, ದ ಅವಕಾಶದಂತೆ ನಡೆಸುವ ಸಂಬಂಧ ಆಯೋಗವು ಅಗತ್ಯ ಕ್ರಮ ಕೈಗೊಳ್ಳಬೇಕಾಗಿರುತ್ತದೆ. 2014ನೇ ಮಾರ್ಚ್ ಅಂತ್ಯಕ್ಕೆ ಮಂಡಲಿಯ ಅವಧಿ ಮುಕ್ತಾಯವಾಗುವ ಫೆಡರಲ್ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಮಂಡಲಿ ಸದಸ್ಯರ ಸಾಮಾನ್ಯ ಚುನಾವಣೆ ಮತ್ತು ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸುವ ಬಗ್ಗೆ ಮತದಾರರ ಪಟ್ಟಿಯ ತಯಾರಿಕೆಗಾಗಿ ಮತ್ತು ಚುನಾವಣೆಗಳನ್ನು ನಡೆಸುವುದಕ್ಕಾಗಿ ಪೂರ್ವಸಿದ್ಧತಾ ಕಾರ್ಯವನ್ನು ಪ್ರಾರಂಭಿಸಬೇಕಾಗಿರುತ್ತದೆ. ಪ್ರತಿಯೊಂದು ಸಹಕಾರ ಸಂಘದ ಮಂಡಲಿಯು ತನ್ನ ಪದಾವಧಿಯು ಮುಕ್ತಾಯವಾಗುವ ದಿನಾಂಕಕ್ಕೆ ಹಿಂದಿನ ಕನಿಷ್ಟ ಆರು ತಿಂಗಳಿಗೆ ಮುಂಚೆ ಸಹಕಾರಿ ಚುನಾವಣಾ ಆಯೋಗಕ್ಕೆ ತಿಳಿಸತಕ್ಕದ್ದಾಗಿದೆ.

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು, 2013 ರ ನಿಯಮ 13ಡಿ ದ ಅವಕಾಶದಂತೆ ಜಿಲ್ಲಾ ಚುನಾವಣಾಧಿಕಾರಿಯು ಕೂಲಂಕುಷ ಪರಿಶೀಲನೆಯ ನಂತರ, ಆಡಳಿತ ಮಂಡಲಿಗಳಿಗೆ ಪದಾವಧಿ ಮುಕ್ತಾಯವಾಗುವ 120 ದಿನಗಳ ಪೂರ್ವದಲ್ಲಿ (i) ಸಹಕಾರ ಸಂಘದ

---2

ಚುನಾವಣಾ ಆಯೋಗ ... ಆಯುಕ್ತರು ... ಬೆಂಗಳೂರು

/ಸಹಕಾರಿಯ ಹೆಸರು ಮತ್ತು ವಿಳಾಸ (ii) ಮಂಡಲಿಗೆ ಆಯ್ಕೆಯಾಗಬೇಕಾಗಿರುವ ನಿರ್ದೇಶಕರ ಸಂಖ್ಯೆ (iii) ಆಡಳಿತ ಮಂಡಲಿ ಪದಾವಧಿ ಮುಕ್ತಾಯವಾಗುವ ದಿನಾಂಕ (iv) ಚುನಾವಣೆಗಳನ್ನು ನಡೆಸಬಹುದಾದ ಸ್ಥಳ ಹಾಗೂ ಚುನಾವಣಾ ಆಯೋಗಕ್ಕೆ ಅವಶ್ಯವಿರುವ ಇತರೆ ಮಾಹಿತಿಗಳನ್ನು ಒಳಗೊಂಡ, ಚುನಾವಣೆಗಳು ಸನ್ನಿಹಿತವಾಗಿರುವ ಎಲ್ಲಾ ಸಹಕಾರ ಸಂಘಗಳ ಕ್ರೋಢೀಕೃತ ಪಟ್ಟಿಯನ್ನು ಕಳುಹಿಸತಕ್ಕದ್ದಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳನ್ನು ನೇಮಿಸುವ ಅಗತ್ಯವಿರುತ್ತದೆ.

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು 2013ರ ನಿಯಮ 2(i-1) ದ ಅವಕಾಶದಂತೆ ಜಿಲ್ಲಾ ಚುನಾವಣಾಧಿಕಾರಿಯನ್ನು ನೇಮಿಸುವ ಅಧಿಕಾರ /ಜವಾಬ್ದಾರಿಯು ಸಹಕಾರ ಚುನಾವಣಾ ಆಯೋಗದ್ದಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಮೂರನೇ ಹಂತದಲ್ಲಿ ಫೆಡರಲ್ ಸಹಕಾರ ಸಂಘಗಳ ಮಂಡಲಿಗಳ ಸಾಮಾನ್ಯ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಯನ್ನು ನಡೆಸುವ ಬಗ್ಗೆ ಜಿಲ್ಲಾ ಚುನಾವಣಾಧಿಕಾರಿಗಳನ್ನು ನೇಮಿಸುವ ಉದ್ದೇಶ ಹೊಂದಿದ್ದು ಈ ಸಂಬಂಧ ಕೆಳಕಂಡ ಆದೇಶ ಹೊರಡಿಸಲಾಗಿದೆ.

## -:ಆದೇಶ:-

**ಸಚುಆ/ಚುನಾವಣೆ/ಜಿಚುಅ/ಫೆಡರಲ್/49/2013-14 ದಿನಾಂಕ: 13.02.2014**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು 2013ರ ನಿಯಮ 2(i-1) ರ ಅವಕಾಶದಂತೆ ಸಹಕಾರ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಶ್ರೀ ಎನ್.ಸಿ. ಮುನಿಯಪ್ಪ, ಕರ್ನಾಟಕ ರಾಜ್ಯದ ಸಹಕಾರ ಚುನಾವಣಾ ಆಯುಕ್ತನಾದ ನಾನು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ-1ರಲ್ಲಿನ ಫೆಡರಲ್ ಸಹಕಾರ ಸಂಘಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸುವುದಕ್ಕೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳಿಗೆ ಸಂಬಂಧಿಸಿದ್ಧಂತೆ ಆಯಾ ಜಿಲ್ಲೆಯ ಕಾರ್ಯವ್ಯಾಪ್ತಿಯಲ್ಲಿ ಇರುವ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಚುನಾವಣಾಧಿಕಾರಿಯನ್ನಾಗಿ ಮುಂದಿನ ಆದೇಶದವರೆಗೆ ನೇಮಿಸಿರುತ್ತೇನೆ. ಜಿಲ್ಲಾ ಚುನಾವಣಾಧಿಕಾರಿಗಳು, ಫೆಡರಲ್ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರು ಸಲ್ಲಿಸಿದ ಮತದಾರರ ಪಟ್ಟಿಯನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಪರಿಶೀಲಿಸಿ ಸಿದ್ದಪಡಿಸಲು ಹಾಗೂ ಮತನೀಡುವ ಹಕ್ಕುಳ್ಳ /ಸುಸ್ತಿದಾರರ ಹಾಗೂ ಸುಸ್ತಿಯಾಗುವವರ ಕರಡು ಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ ಕನಿಷ್ಟ 45 ದಿನಗಳ ಮುಂಚಿತವಾಗಿ ಪ್ರಕಟಿಸಿ, ಆಕ್ಷೇಪಣೆ ಕರೆಯುವುದು, ಅಂತಿಮ ಮತದಾರರ ಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ 15 ದಿನಗಳ ಪೂರ್ವದಲ್ಲಿ ಪ್ರಕಟಿಸುವುದರ ಕುರಿತು ಅಗತ್ಯ ಕ್ರಮವಿಡತಕ್ಕದ್ದು. ಪ್ರತಿ ಫೆಡರಲ್ ಸಹಕಾರ ಸಂಘದ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಅರ್ಹತಾಪಟ್ಟಿ, ಸುಸ್ತಿದಾರರ ಕರಡು ಪಟ್ಟಿ ಹಾಗೂ ಮತದಾನದ

---3

ಹಕ್ಕನ್ನು ಹೊಂದಿರದ ಇತರ ಸದಸ್ಯರ ಕರಡು ಪಟ್ಟಿಗಳನ್ನು ಹಾಗೂ ಮತದಾರರ ಅಂತಿಮ ಪಟ್ಟಿ ಮತ್ತು ಚುನಾವಣಾ ವೇಳಾಪಟ್ಟಿಗಳನ್ನು ಸಂಬಂಧಪಟ್ಟ ಫೆಡರಲ್ ಸಹಕಾರ ಸಂಘದ / ಸೂಚನಾಫಲಕದಲ್ಲಿ ಹಾಗೂ ಸಹಕಾರ ಇಲಾಖೆಯ ಸ್ಥಳೀಯ ಅಧಿಕಾರಿಯ ಕಛೇರಿಯ ಸೂಚನಾಫಲಕದಲ್ಲಿ ಪ್ರಕಟಿಸತಕ್ಕದ್ದು. ಅಲ್ಲದೇ ಜಿಲ್ಲಾ ಚುನಾವಣಾಧಿಕಾರಿಗಳು ಸಹಾಯಕ ಚುನಾವಣಾಧಿಕಾರಿಗಳ ನೆರವಿನೊಂದಿಗೆ ಅನುಬಂಧ II ರಲ್ಲಿ ವಿವರಿಸಿರುವಂತೆ ಅಧಿನಿಯಮ / ನಿಯಮಗಳ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಅಗತ್ಯ ಕ್ರಮವಿಡಲು ಆದೇಶಿಸಿದೆ.

(ಎನ್.ಸಿ. ಮುನಿಯಪ್ಪ)
ಸಹಕಾರ ಚುನಾವಣಾ ಆಯುಕ್ತರು

ಗೆ,

ಜಿಲ್ಲಾಧಿಕಾರಿಗಳು,

---------------- ಜಿಲ್ಲೆ

---------------- ಹಾಗೂ

ಜಿಲ್ಲಾ ಚುನಾವಣಾಧಿಕಾರಿ (ಫೆಡರಲ್ ಸಂಘಗಳು)

---------------- ಜಿಲ್ಲೆ.

ಪ್ರತಿಗಳು:-

1. ಮಾನ್ಯ ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆ, 6ನೇ ಅಂತಸ್ತು, ಬಹುಮಹಡಿ ಕಟ್ಟಡ, ಬೆಂಗಳೂರು-560 001.
2. ಸಹಕಾರ ಸಂಘಗಳ ನಿಬಂಧಕರು, ನಂ.1 ಅಲಿ ಆಸ್ಕರ್ ರಸ್ತೆ, ಬೆಂಗಳೂರು- 560052
3. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ) (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು
4. ಸಹಕಾರ ಸಂಘಗಳ ಜಂಟಿ ನಿಬಂಧಕರು, (ಆಡಳಿತ ಮತ್ತು ಅಭಿವೃದ್ಧಿ), (ಪಟ್ಟಣ ಬ್ಯಾಂಕುಗಳು), (ಐಸಿಡಿಪಿ), (ಕಾನೂನುಕೋಶ), ಕೇಂದ್ರ ಕಛೇರಿ, ಬೆಂಗಳೂರು
5. ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರುಗಳಿಗೆ
6. ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ
7. ಸಂಬಂಧಿಸಿದ ಫೆಡರಲ್ ಸಹಕಾರ ಸಂಘಗಳ ವ್ಯವಸ್ಥಾಪಕ ನಿರ್ದೇಶಕರುಗಳಿಗೆ
8. ಕಛೇರಿ ಆದೇಶ /ರಕ್ಷಾ ಕಡತ.

ಆಯುಕ್ತರು, ಸಹಕಾರ ಚುನಾವಣಾ ಆಯೋಗ, ಬೆಂಗಳೂರು ರವರ ಆದೇಶ ಸಂಖ್ಯೆ

:ಸಚುಆ/ಚುನಾವಣೆ/ಜಿಚುಅ/ಫೆಡರಲ್/49/2013-14 ದಿನಾಂಕ:13.02.2014ಕ್ಕೆ

# ಅನುಬಂಧ I

| ಕ್ರ ಸಂ | ಜಿಲ್ಲಾಧಿಕಾರಿಗಳು | ಜಿಲ್ಲಾ ಚುನಾವಣಾಧಿಕಾರಿಯಾಗಿ (ಫೆಡರಲ್ ಸಂಘಗಳು) ನೇಮಿಸಿರುವ ಜಿಲ್ಲೆ | ಚುನಾವಣೆ ನಡೆಸಬೇಕಾಗಿರುವ ಫೆಡರಲ್ ಸಹಕಾರ ಸಂಘಗಳ ವಿವರ |
|---|---|---|---|
| 1 | ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ | ಬೆಂಗಳೂರು ನಗರ ಜಿಲ್ಲೆ | 1. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಬೆಂಗಳೂರು.<br>2. ಬೆಂಗಳೂರು ಜಿಲ್ಲಾ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ವಿದ್ಯುತ್ ಚಾಲಿತ ನೇಕಾರರ ಉತ್ಪಾದನಾ ಮತ್ತು ಮಾರಾಟ ಸಹಕಾರ ಮಹಾಮಂಡಲ ನಿ., ಬೆಂಗಳೂರು. |
| 2 | ಜಿಲ್ಲಾಧಿಕಾರಿಗಳು, ಕೋಲಾರ | ಕೋಲಾರ ಜಿಲ್ಲೆ | 1. ಕೋಲಾರ- ಚಿಕ್ಕಬಳ್ಳಾಪುರ, ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಬೆಳಗಾನಹಳ್ಳಿ ಕೋಲಾರ.<br>2. ಸವಿತಾ ವಿವಿದೋದ್ದೇಶ ಸಹಕಾರ ಸಂಘಗಳ ಮಹಾಮಂಡಳ ನಿ., ಕೋಲಾರ |
| 3 | ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ | ಶಿವಮೊಗ್ಗ ಜಿಲ್ಲೆ | 1. ಶಿವಮೊಗ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಶಿವಮೊಗ್ಗ<br>2. ಶಿವಮೊಗ್ಗ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಮಾಚೇನಹಳ್ಳಿ |
| 4 | ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ | ಚಿತ್ರದುರ್ಗ ಜಿಲ್ಲೆ | 1. ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಒಕ್ಕೂಟ ನಿ., ಚಿತ್ರದುರ್ಗ<br>2. ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿ., ಚಿತ್ರದುರ್ಗ<br>3. ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಚಿತ್ರದುರ್ಗ |
| 5 | ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ | ದಾವಣಗೆರೆ ಜಿಲ್ಲೆ | ದಾವಣಗೆರೆ ಜಿಲ್ಲಾ ಸಹಕಾರ ಯೂನಿಯನ್ ನಿ., ದಾವಣಗೆರೆ |
| 6 | ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ | ಚಿಕ್ಕಬಳ್ಳಾಪುರ ಜಿಲ್ಲೆ | ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಒಕ್ಕೂಟ ನಿ., ಚಿಕ್ಕಬಳ್ಳಾಪುರ. |
| 7 | ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ | ಮೈಸೂರು ಜಿಲ್ಲೆ | ಮೈಸೂರು ಜಿಲ್ಲಾ ಕೇಂದ್ರ ಸಗಟು ಮಾರಾಟ ಮಳಿಗೆ ನಿ., ಜನತಾಬಜಾರ್, ಮೈಸೂರು |

| | | | |
|---|---|---|---|
| 8 | ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು | ದಕ್ಷಿಣ ಕನ್ನಡ ಜಿಲ್ಲೆ | 1. ದಕ್ಷಿಣ ಕನ್ನಡ ಜಿಲ್ಲೆ ಕೇಂದ್ರ ಸಹಕಾರ ಬ್ಯಾಂಕ್ ನಿ., ಮಂಗಳೂರು<br>2. ದಕ್ಷಿಣ ಕನ್ನಡ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಕುಲಶೇಖರ್ ಮಂಗಳೂರು<br>3. ದಕ್ಷಿಣ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ., ಮಂಗಳೂರು<br>4. ಪುತ್ತೂರು ತಾಲ್ಲೂಕು ಸಹಕಾರ ಸಂಘಗಳ ಒಕ್ಕೂಟ ನಿ., ತಾಲ್ಲೂಕು ಕಛೇರಿ ರಸ್ತೆ, ಪುತ್ತೂರು<br>5. ಸುಳ್ಯ ತಾಲ್ಲೂಕು ಸಹಕಾರ ಸಂಘಗಳ ಒಕ್ಕೂಟ ನಿ., ಸುಳ್ಯ ಸಹಕಾರಿ ವ್ಯವಸಾಯಕ ಸಂಘ ನಿ., ಸುಳ್ಯ ತಾಲ್ಲೂಕು<br>6. ಬೆಳ್ತಂಗಡಿ ತಾಲ್ಲೂಕು ಸಹಕಾರ ಸಂಘಗಳ ಒಕ್ಕೂಟ ನಿ., ಟಿ.ಎ.ಪಿ.ಸಿ.ಎಂ.ಎಸ್. ಕಛೇರಿ ಬೆಳ್ತಂಗಡಿ ತಾಲ್ಲೂಕು |
| 9 | ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ | ಕೊಡಗು ಜಿಲ್ಲೆ | ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಕೊಡಗು ಜಿಲ್ಲೆ, ಮಡಿಕೇರಿ |
| 10 | ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, | ಹಾಸನ ಜಿಲ್ಲೆ | 1. ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಹಾಸನ (ಜಿಲ್ಲಾ ಮಟ್ಟ ಮೀರಿದ ವ್ಯಾಪ್ತಿ)<br>2. ಜಿಲ್ಲಾ ಸಹಕಾರ ಯೂನಿಯನ್ ನಿ., ಹಾಸನ |
| 11 | ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಗೆಜ್ಜಲಗೆರೆ. |
| 12 | ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ | ಬೆಳಗಾವಿ ಜಿಲ್ಲೆ | 1. ಬೆಳಗಾವಿ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಬೆಳಗಾವಿ |
| 13 | ಜಿಲ್ಲಾಧಿಕಾರಿಗಳು, ವಿಜಾಪುರ ಜಿಲ್ಲೆ | ವಿಜಾಪುರ ಜಿಲ್ಲೆ | ವಿಜಾಪುರ ಹಾಗೂ ಬಾಗಲಕೋಟೆ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ವಿಜಾಪುರ. |
| 14 | ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ | ಧಾರವಾಡ ಜಿಲ್ಲೆ | 1. ಧಾರವಾಡ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಲಕ್ಕಮ್ಮನಹಳ್ಳಿ, ಧಾರವಾಡ<br>2. ಧಾರವಾಡ ಜಿಲ್ಲಾ ಕೋ-ಆಪರೇಟಿವ್ ಮಾರ್ಕೇಟಿಂಗ್ ಫೆಡರೇಷನ್ ನಿ., ಎ.ಪಿ.ಎಂ.ಸಿ ಹುಬ್ಬಳ್ಳಿ<br>3. ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟ ನಿ., (ಕೆ.ಓ.ಎಫ್) ತಾಜನಗರ, ಹುಬ್ಬಳ್ಳಿ |
| 15 | ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ, ಕಾರವಾರ | ಉತ್ತರ ಕನ್ನಡ ಜಿಲ್ಲೆ | ಉತ್ತರ ಕನ್ನಡ ಜಿಲ್ಲಾ ಯೂನಿಯನ್ ಕೋ-ಆಪರೇಟಿವ್ ಸೊಸೈಟಿ ಲಿ., ಕುಮಟಾ |
| 16 | ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ | ಬಳ್ಳಾರಿ ಜಿಲ್ಲೆ | ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಬಳ್ಳಾರಿ |
| 17 | ಜಿಲ್ಲಾಧಿಕಾರಿಗಳು, ಬೀದರ ಜಿಲ್ಲೆ | ಬೀದರ್ ಜಿಲ್ಲೆ | ಜಿಲ್ಲಾ ಸಹಕಾರ ಯೂನಿಯನ್ ನಿ., ಬೀದರ |

----3

| | | | |
|---|---|---|---|
| 18 | ಜಿಲ್ಲಾಧಿಕಾರಿಗಳು, ಕೊಪ್ಪಳ | ಕೊಪ್ಪಳ ಜಿಲ್ಲೆ | ಕೊಪ್ಪಳ ಜಿಲ್ಲಾ ಸಹಕಾರ ಯೂನಿಯನ್ ನಿ., ಕೊಪ್ಪಳ |
| 19 | ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ | ರಾಯಚೂರು ಜಿಲ್ಲೆ | 1. ಜಿಲ್ಲಾ ಸಹಕಾರ ಯೂನಿಯನ್ ನಿ., ರಾಯಚೂರು<br>2. ಕರ್ನಾಟಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟ ನಿ., ರಾಯಚೂರು |
| 20 | ಜಿಲ್ಲಾಧಿಕಾರಿಗಳು, ಯಾದಗೀರ್ ಜಿಲ್ಲೆ | ಯಾದಗಿರಿ ಜಿಲ್ಲೆ | 1. ಸೌರಾಷ್ಟ್ರ ಸೋಮನಾಥ ಸಿದ್ದಾಪುರ ವಿತರಣಾ ಕಾಲುವೆ ಮಟ್ಟದ ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಳ ನಿ., ಕುಕ್ಕೇರಾ<br>2. ನೀಲಕಂಠೇಶ್ವರ ಕಾಲುವೆ ಮಟ್ಟದ ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಲಿ ನಿ., ಹುಣಸಗಿ<br>3. ಬಸವೇಶ್ವರ ವಿತರಣಾ ಕಾಲುವೆ ಮಟ್ಟದ ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಲಿ ನಿ., ಕೋಡೆಕಲ್ |

(ಎನ್.ಸಿ. ಮುನಿಯಪ್ಪ)
**ಸಹಕಾರ ಚುನಾವಣಾ ಆಯುಕ್ತರು**
**ಕರ್ನಾಟಕ ರಾಜ್ಯ, ಬೆಂಗಳೂರು**

**ಆಯುಕ್ತರು, ಸಹಕಾರ ಚುನಾವಣಾ ಆಯೋಗ, ಬೆಂಗಳೂರು ರವರ ಆದೇಶ ಸಂಖ್ಯೆ: ಸಚುಆ/ಚುನಾವಣೆ/ಜಿಚುಅ/ಫೆಡರಲ್/49/2013-14, ದಿನಾಂಕ:13.02.2014ಕ್ಕೆ**

# ಅನುಬಂಧ II

1. ಫೆಡರಲ್ ಸಹಕಾರ ಸಂಘಗಳ ಮಂಡಳಿಗಳ ಸಾಮಾನ್ಯ ಚುನಾವಣೆಯನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959, ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960, ಹಾಗೂ ಮಾಧ್ಯಮಿಕ ಸಂಘಗಳ ನೋಂದಾಯಿತ ಉಪವಿಧಿಗಳನ್ವಯ ಹಾಗೂ ಸಹಕಾರ ಚುನಾವಣಾ ಆಯೋಗದ ನಿರ್ದೇಶನ / ಮಾರ್ಗಸೂಚಿಗಳನ್ವಯ ನಡೆಸುವ ಬಗ್ಗೆ ಜಿಲ್ಲಾ ಚುನಾವಣಾಧಿಕಾರಿಗಳು ಅಗತ್ಯ ಕ್ರಮವಿಡತಕ್ಕದ್ದಾಗಿರುತ್ತದೆ.
2. ಸಹಕಾರ ಚುನಾವಣಾ ಆಯೋಗವು ಚುನಾವಣೆಗಳನ್ನು /ಪದಾಧಿಕಾರಿಗಳ ಚುನಾವಣೆಯನ್ನು ನಡೆಸುವ ಸಂಬಂಧವಾಗಿ ಈಗಾಗಲೇ ಹಲವಾರು / ಅಧಿಸೂಚನೆ / ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಿದ್ದು ಈಗಾಗಲೇ ಪತ್ರ ಮುಖೇನಾ/ ಇ-ಮೇಲ್ ಮೂಲಕ ಎಲ್ಲಾ ಅಧಿಕಾರಿಗಳನ್ನು ಕಳುಹಿಸಲಾಗಿದೆ ಆಯೋಗದ ವೆಬ್‌ಸೈಟ್ ಗಮನಿಸುವುದರಿಂದ ಇದನ್ನು ಪಡೆಯಬಹುದಾಗಿದೆ.
3. ಆಯೋಗವು ಫೆಡರಲ್ ಸಹಕಾರ ಸಂಘಗಳ ಮಂಡಲಿ ಚುನಾವಣೆಗಳನ್ನು ನಡೆಸುವ ಸಂಬಂಧ ಚೆಕ್‌ಲಿಸ್ಟ್‌ನಲ್ಲಿ ವಿವರಿಸಿರುವಂತೆ ಕ್ರಮವಿಡತಕ್ಕದ್ದು.
4. ಸದಸ್ಯರ ಮತದ ಬಗ್ಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 20ರಲ್ಲಿ ವಿವರಿಸಿದೆ ಅಲ್ಲದೇ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960, ಹಾಗೂ ಸಂಘದ ಉಪವಿಧಿಗಳನ್ನು ಗಮನಿಸತಕ್ಕದ್ದಾಗಿದೆ.
5. ಸಹಕಾರ ಸಂಘದ ಸದಸ್ಯತ್ವ /ಮತದಾನದ ಹಕ್ಕು ಸಾಧಿಸುವ ಸಂಬಂಧ ಯಾವುದೇ ನ್ಯಾಯಾಲಯದಲ್ಲಿ ವಿವಾದ /ವ್ಯಾಜ್ಯಗಳಿದ್ದು, ನ್ಯಾಯಾಲಯದಿಂದ ಯಾವುದೇ ಮಧ್ಯಂತರ ಆದೇಶಗಳಿದ್ದಲ್ಲಿ ಆ ಬಗ್ಗೆ ಗಮನಿಸಿ ಅಗತ್ಯ ಕ್ರಮವಿಡುವುದು ವಿವಾದಗಳು ಇತ್ಯರ್ಥವಾಗಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ಸಂಬಂಧಿಸಿದ ಸಂಘವು ಅಗತ್ಯ ಕ್ರಮವಿಟ್ಟಿರುವ ಬಗ್ಗೆ ಗಮನಿಸುವುದು.
6. ಚುನಾವಣೆಗಳಿಗಾಗಿ ಮತದಾರರ ಪಟ್ಟಿಗಳನ್ನು ತಯಾರಿಸುವುದಕ್ಕಾಗಿ ಮತ್ತು ಚುನಾವಣೆಗಳನ್ನು ನಡೆಸುವುದಕ್ಕಾಗಿ ತಗಲುವ ವೆಚ್ಚವನ್ನು ಸಂಬಂಧಿಸಿದ ಸಂಘಗಳ ಭರಿಸತಕ್ಕದ್ದಾಗಿದೆ. [ಅಧಿನಿಯಮ ಪ್ರಕರಣ 39ಎಎ(14)]
7. ಮತದಾರರ ಪಟ್ಟಿಯನ್ನು ಜಿಲ್ಲಾ ಚುನಾವಣಾಧಿಕಾರಿಯು ಸಿದ್ದಪಡಿಸುವ ಸಂಬಂಧ ಸರಿಯಾದ ಮಾಹಿತಿ / ದಾಖಲೆಯನ್ನು ಒದಗಿಸುವ ಜವಾಬ್ದಾರಿ ಸಂಬಂಧಿಸಿದ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿದ್ದಾಗಿರುತ್ತದೆ. [ಅಧಿನಿಯಮ ಪ್ರಕರಣ 39ಎಎ(15)] [ನಿಯಮ 13-ಡಿ(4)] '
8. ಸಹಕಾರ ಸಂಘದ ಮತದಾನದ ಹಕ್ಕುಳ್ಳ ಮತದಾರರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ , ಮತದಾನಕ್ಕೆ ಅರ್ಹತೆ ಹೊಂದಿರದ ಇತರೆ ಸದಸ್ಯರ ಪಟ್ಟಿ (ಕಾರಣಗಳನ್ನು ನಮೂದಿಸಿ) ಹಾಗೂ ಸುಸ್ತಿಯಾಗುವವರ ಕರಡು ಪಟ್ಟಿಯನ್ನು ಸಿದ್ದಪಡಿಸುವ ಜವಾಬ್ದಾರಿ ಪ್ರತಿ ಸಂಘದ /ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕನದ್ದಾಗಿರುತ್ತದೆ. ಈ ರೀತಿಯ ಪಟ್ಟಿಗಳನ್ನು ಚುನಾವಣಾ ದಿನಾಂಕಕ್ಕೆ ಕನಿಷ್ಠ 60 ದಿವಸಗಳು ಮುಂಚಿತವಾಗಿ ಜಿಲ್ಲಾ ಚುನಾವಣಾಧಿಕಾರಿಗಳಿಗೆ ದಾಖಲಾತಿಗಳ ಸಹಿತ ಸಲ್ಲಿಸಬೇಕಾಗಿರುತ್ತದೆ. ಜಿಲ್ಲಾ ಚುನಾವಣಾಧಿಕಾರಿಯು ಸಂಬಂಧಿಸಿದ ಸಂಘಗಳು/ ಸಹಕಾರಿಗಳು ಸಲ್ಲಿಸುವ ಮೇಲ್ಕಂಡ ಪಟ್ಟಿಗಳನ್ನು ನಿಯಮಾನುಸಾರ ಅರ್ಹಮತದಾರರ ಪಟ್ಟಿ ಪರಿಶೀಲಿಸಿ ಸಿದ್ದಪಡಿಸುವುದು ಮತ್ತು ಅಧಿನಿಯಮ /ನಿಯಮಗಳನ್ವಯ ಅಗತ್ಯ ಕ್ರಮವಿಡಬೇಕಾಗಿರುತ್ತದೆ. ಈ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಯು ಅವರಿಗೆ ನೆರವಾಗಲು ಮತ್ತು ಮತದಾರರ ಪಟ್ಟಿಯನ್ನು ನಿಯಮಾನುಸಾರ ಪರಿಶೀಲಿಸಲು ಆ ಪ್ರಕಾರ ಸರಿಯಾದ ಅರ್ಹ ಮತದಾರರ ಪಟ್ಟಿ ತಯಾರಿಸಲು ಮೇಲ್ವಿಚಾರಣ ತಂಡವನ್ನು ರಚಿಸಬಹುದಾಗಿದೆ.

---2

9. ಪ್ರತಿಯೊಂದು ಫೆಡರಲ್ ಸಹಕಾರ ಸಂಘದ ಮಂಡಲಿಯೂ ಸಹಕಾರ ಚುನಾವಣಾ ಆಯೋಗವು ಸುಗಮವಾಗಿ ಮತದಾರರ ಪಟ್ಟಿಗಳನ್ನು ತಯಾರಿಸುವುದಕ್ಕೆ ಮತ್ತು ಚುನಾವಣೆಗಳನ್ನು ನಡೆಸುವುದಕ್ಕೆ ಅವಶ್ಯಕವಾದ ಎಲ್ಲಾ ನೆರವು, ಸಹಾಯ ಮತ್ತು ಸಹಕಾರವನ್ನು ನೀಡಬೇಕಾಗಿರುತ್ತದೆ.

10. ಮತದಾರರ ಪಟ್ಟಿಯನ್ನು ಸಂಘದ ಬೈಲಾದಲ್ಲಿರುವಂತೆ ಮತದಾರರ ಪ್ರತ್ಯೇಕ ಕ್ಷೇತ್ರಗಳಿದ್ದಲ್ಲಿ ಕ್ಷೇತ್ರವಾರು ಸಿದ್ದಪಡಿಸಬೇಕಾಗಿರುತ್ತದೆ. ಮತದಾರರ ಪಟ್ಟಿಯಲ್ಲಿ ಸದಸ್ಯರ ಹೆಸರು / ಸದಸ್ಯರ ತಂದೆ /ತಾಯಿ ಹೆಸರು ಅಥವಾ ಪತಿಯ ಹೆಸರು, ವಿಳಾಸ, ಸದಸ್ಯತ್ವ /ಪ್ರವೇಶತ್ವ ಸಂಖ್ಯೆ, ಗುರುತಿನ ಕಾರ್ಡ್ ನೀಡಿದ್ದಲ್ಲಿ ಅದರ ಸಂಖ್ಯೆಯನ್ನು ತಪ್ಪದೇ ನಮೂದಿಸಬೇಕಾಗಿರುತ್ತದೆ.

11. ಅಂತಿಮ ಮತದಾರರ ಪಟ್ಟಿಯು ಫೆಡರಲ್ ಸಹಕಾರ ಸಂಘದ ಸಂಬಂಧದಲ್ಲಿ ಮತದಾನದ ಹಕ್ಕುಳ್ಳ ಮತ್ತು ಮತದಾನ ಮಾಡಲು ಅರ್ಹತೆ ಹೊಂದಿದ ಸದಸ್ಯ ಸಂಘಗಳ ಡೆಲಿಗೇಟ್‌ನ ವಿವರಗಳನ್ನುಳ್ಳ ಪಟ್ಟಿಯಾಗಿರುತ್ತದೆ. ಪ್ರತಿ ಸಹಕಾರ ಸಂಘವು ಅಂಥ ಮತದಾರರ ಪಟ್ಟಿಯ ಪ್ರತಿಯನ್ನು ಸಂಘದ ಕಛೇರಿಯಲ್ಲಿ ಮತ್ತು ಜಿಲ್ಲಾ ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಪ್ರಕಟಿಸಿ ವೀಕ್ಷಣೆಗೆ ಮುಕ್ತಾಯವಾಗಿಟ್ಟಿರತಕ್ಕದ್ದು.

12. ಸಹಕಾರ ಸಂಘಗಳ ಆಡಳಿತ ಮಂಡಳಿಗೆ /ಪದಾಧಿಕಾರಿಗಳ ಸ್ಥಾನಗಳಿಗೆ ಚುನಾವಣೆಯನ್ನು ನಡೆಸುವ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಯು ಕಾನೂನಿಗೆ ಅನುಗುಣವಾಗಿ. ಸಹಕಾರ ಚುನಾವಣಾ ಆಯೋಗದ ಪರವಾಗಿ ಕಾರ್ಯನಿರ್ವಹಿಸುವ ಸಂಬಂಧ ಆಗಾಗ್ಗೆ ಆಯೋಗವು ನೀಡುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಲು ಸೂಚಿಸಿದೆ.

13. ಜಿಲ್ಲಾ ಚುನಾವಣಾಧಿಕಾರಿಗಳು ಅಧಿನಿಯಮ / ನಿಯಮಗಳನ್ವಯ ಕೈಗೊಳ್ಳುವ ಕ್ರಮಗಳು ಮುಕ್ತ ಹಾಗೂ ಪಾರದರ್ಶಕತೆಯನ್ನು ಹೊಂದಿರಬೇಕಾಗಿದ್ದು ಮಾಹಿತಿ ಹಕ್ಕು ಅಧಿನಿಯಮದಡಿ ಯಾವುದೇ ಅರ್ಜಿದಾರರಿಗೆ, ಸದರಿ ಅಧಿಕಾರಿಗಳು ಹೊರಡಿಸುವ ಆದೇಶ /ಅಧಿಸೂಚನೆ / ಪತ್ರ ವ್ಯವಹಾರದ ಪ್ರತಿಯನ್ನು ಸದರಿ ಅಧಿನಿಯಮದಡಿ ನೀಡಬೇಕಾಗಿರುತ್ತದೆ ಈ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಹೆಚ್ಚಿನ ಎಚ್ಚರ ವಹಿಸಿ ಕಾನೂನಿನಗನುಗುಣವಾಗಿ ಪಾರದರ್ಶಕವಾಗಿ ಚುನಾವಣೆ ನಡೆಸಲು ಅಗತ್ಯ ಕ್ರಮವಿಡತಕ್ಕದ್ದು.

(ಎನ್.ಸಿ. ಮುನಿಯಪ್ಪ)
**ಸಹಕಾರ ಚುನಾವಣಾ ಆಯುಕ್ತರು**
**ಕರ್ನಾಟಕ ರಾಜ್ಯ, ಬೆಂಗಳೂರು**

**ದಿನಾಂಕ:31.3.2014ರ ಅಂತ್ಯಕ್ಕೆ ಅವಧಿ ಮುಗಿಯಲಿರುವ ಫೆಡರಲ್ (Federal Societies) ಸಹಕಾರ ಸಂಘಗಳ ಆಡಳಿತ ಮಂಡಲಿಗೆ ಸಾಮಾನ್ಯ ಚುನಾವಣೆ ನಡೆಸುವಿಕೆ – ಹಂತ ಹಂತವಾಗಿ ನಿಯಮಾನುಸಾರ ಜಿಲ್ಲಾ ಚುನಾವಣಾಧಿಕಾರಿಯು ಕ್ರಮವಿಡುವ ಬಗ್ಗೆ ಚೆಕ್‌ಲಿಸ್ಟ್**

## ಚೆಕ್‌ಲಿಸ್ಟ್

ಉಲ್ಲೇಖ:- ಆಯೋಗದ ಅಧಿಸೂಚನೆ:ಸಚುಆ/46/ಚುನಾವಣೆ/ಅಸೂ/2013-14, ದಿನಾಂಕ:16.01.2014

| ಕ್ರಸಂ | ವಿವರ | ಷರಾ |
|---|---|---|
| 1 | ಫೆಡರಲ್ ಸಹಕಾರ ಸಂಘಗಳ ಆಡಳಿತ ಮಂಡಳಿ ಚುನಾವಣೆಗಳನ್ನು ನಡೆಸುವ ಸಂಬಂಧ ಚುನಾವಣಾ ದಿನಾಂಕಗಳನ್ನು ನಿಗಧಿಪಡಿಸಿರುವುದು (ದಿನಾಂಕ: 16.01.2014ರ ಆಯೋಗದ ಅಧಿಸೂಚನೆಯಂತೆ) | ದಿನಾಂಕ:24.05.2014 ರಿಂದ ದಿನಾಂಕ:26.05.2014ರ ವರೆಗಿನ ಅವಧಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗೆ ಸೂಕ್ತವೆನಿಸುವ ಯಾವುದೇ ದಿನಾಂಕ ಚುನಾವಣೆ ನಿಗಧಿಪಡಿಸತಕ್ಕದ್ದು. |
| 2 | ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ, ಮತದಾನದ ಹಕ್ಕನ್ನು ಹೊಂದಿರದ ಇತರ ಸದಸ್ಯರ ಅಥವಾ ಪ್ರತಿನಿಧಿಗಳ ಮತ್ತು ಡೆಲಿಗೇಟ್‌ಗಳ ಕರಡುಪಟ್ಟಿಯನ್ನು ದಾಖಲಾತಿಗಳ ಸಹಿತ ಸಂಬಂಧಿಸಿದ ಮಾಧ್ಯಮಿಕ ಸಹಕಾರ ಸಂಘದ ಮುಖ್ಯಕಾರ್ಯನಿರ್ವಾಹಕರು ಜಿಲ್ಲಾ ಚುನಾವಣಾಧಿಕಾರಿಗೆ ಚುನಾವಣಾ ದಿನಾಂಕದ ಪೂರ್ವದ ಕನಿಷ್ಟ 60 ದಿನಗಳ ಮುಂಚಿತವಾಗಿ ಸಲ್ಲಿಸುವಿಕೆ ಬಗ್ಗೆ.<br>[ ಕರ್ನಾಟಕ ಸಹಕಾರ ಸಂಘಗಳ ನಿಯಮ 1960 ರ ನಿಯಮ 13ಡಿ (4) ಮತ್ತು (5) | ದಿನಾಂಕ:24.03.2014 ರಿಂದ ದಿನಾಂಕ:26.03.2014ರ ವರೆಗಿನ ಅವಧಿಯಲ್ಲಿ ನಿಗಧಿಪಡಿಸಿದ ಚುನಾವಣಾ ದಿನಾಂಕಕ್ಕೆ ಪೂರ್ವದ ಕನಿಷ್ಟ 60 ದಿನಗಳ ಮುಂಚೆ ಜಿಲ್ಲಾ ಚುನಾವಣಾಧಿಕಾರಿಗೆ ಸಂಘದ ಮುಖ್ಯ ಕಾರ್ಯನಿರ್ವಾಹಕರು ನಿಯಮಾನುಸಾರ ಸಲ್ಲಿಸಬೇಕಾಗಿರುತ್ತದೆ. |
| 3 | ಮೇಲೆ ನಮೂದಿಸಲಾದ ಕಂಡಿಕೆ (2) ರಲ್ಲಿ ವಿವರಿಸಿರುವಂತೆ ಕರಡು ಮತದಾರರ ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ ಹಾಗೂ ಅಂತಿಮ ಮತದಾರರ ಪಟ್ಟಿಯ ಪ್ರಕಟಣೆಗೆ ನಿಗಧಿಪಡಿಸಿದ ದಿನಾಂಕದ ಪೂರ್ವದಲ್ಲಿ ಮರುಪಾವತಿಗೆ ಬಾಕಿಯಾಗುವ ಸದಸ್ಯರ ಕರಡು ಪಟ್ಟಿಗಳನ್ನು, ಮತದಾನದ ಹಕ್ಕನ್ನು ಹೊಂದಿರದ ಇತರ ಸದಸ್ಯರ ಅಥವಾ ಪ್ರತಿನಿಧಿಗಳ ಮತ್ತು ಡೆಲಿಗೇಟ್‌ಗಳ ಪಟ್ಟಿಯ ಸಂಬಂಧ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಸಲ್ಲಿಸಲು ಚುನಾವಣಾ ದಿನಾಂಕಕ್ಕೆ ಪೂರ್ವದ ಕನಿಷ್ಟ 45 ದಿನಗಳ ಮುಂಚಿತವಾಗಿ ಜಿಲ್ಲಾ ಚುನಾವಣಾಧಿಕಾರಿಯು (ಡಿ.ಇ.ಓ) ಪ್ರಕಟಿಸಬೇಕಾಗಿರುತ್ತದೆ.<br>[ ಕರ್ನಾಟಕ ಸಹಕಾರ ಸಂಘಗಳ ನಿಯಮ 13ಡಿ(3) (ಎ) | ದಿನಾಂಕ:08.04.2014 ರಿಂದ ದಿನಾಂಕ:10.04.2014 ರ ವರೆಗಿನ ಅವಧಿಯಲ್ಲಿ ನಿಗಧಿಪಡಿಸಿದ ಚುನಾವಣೆ ದಿನಾಂಕಕ್ಕೆ ಪೂರ್ವದ ಕನಿಷ್ಟ 45 ದಿನಗಳ ಮುಂಚೆ ಪ್ರಕಟಿಸತಕ್ಕದ್ದು. |

| | | |
|---|---|---|
| 4 | ಅಂತಿಮ ಅರ್ಹ ಮತದಾರರ ಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ ಪೂರ್ವದ 15ನೇ ದಿನದಂದು ಅಥವಾ ಮುಂಚಿತವಾಗಿ ಪ್ರಕಟಿಸುವುದು. [ ಕರ್ನಾಟಕ ಸಹಕಾರ ಸಂಘಗಳ ನಿಯಮ 13ಡಿ(3)(ಬಿ) ಮತ್ತು ಸೌಹಾರ್ದ ಸಹಕಾರಿ ನಿಯಮ 5ಬಿ(6)] ಅಂತಿಮ ಮತದಾರರ ಪಟ್ಟಿಯು ಮಾಧ್ಯಮಿಕ ಸಹಕಾರ ಸಂಘದ ಸಂಬಂಧದಲ್ಲಿ, ಮತದಾನದ ಹಕ್ಕುಳ್ಳ ಎಲ್ಲಾ ಬಿಡಿ ಸದಸ್ಯರು ಮತ್ತು ಸದಸ್ಯ ಸಂಘಗಳ ಡೆಲಿಗೇಟ್‌ಗಳ ವಿವರಗಳನ್ನು ಒಳಗೊಂಡಿರತಕ್ಕದ್ದು. | ದಿನಾಂಕ:08.05.2014 ರಿಂದ ದಿನಾಂಕ:10.05.2014 ರ ವರೆಗಿನ ಅವಧಿಯಲ್ಲಿ ನಿಗಧಿಪಡಿಸಿದ ಚುನಾವಣಾ ದಿನಾಂಕಕ್ಕೆ ಪೂರ್ವದ 15ನೇ ದಿನದಂದು ಅಥವಾ ಮುಂಚಿತವಾಗಿ ಪ್ರಕಟಿಸತಕ್ಕದ್ದು. |
| 5 | ಸಹಕಾರ ಚುನಾವಣಾ ಆಯೋಗವು ಮಾಧ್ಯಮಿಕ ಸಹಕಾರ ಸಂಘಗಳಿಗೆ ಚುನಾವಣೆ ನಡೆಸಲು ನಿಗಧಿಪಡಿಸಿರುವ ಅಧಿಸೂಚನೆಯಂತೆ, ನಿಯಮ 14ರಂತೆ ಜಿಲ್ಲಾ ಚುನಾವಣಾಧಿಕಾರಿಯು ನಮೂನೆ XI ರಲ್ಲಿ ಅಧಿಸೂಚನೆ ಹೊರಡಿಸುವ ಬಗ್ಗೆ ಕ್ರಮ. | ಜಿಲ್ಲಾ ಚುನಾವಣಾಧಿಕಾರಿಯು ಕರ್ನಾಟಕ ಸಹಕಾರ ಸಂಘಗಳ ನಿಯಮ 14 ರನ್ವಯ ಸಾಮಾನ್ಯ ಚುನಾವಣಾ ಅಧಿಸೂಚನೆಯನ್ನು ಹೊರಡಿಸತಕ್ಕದ್ದು. |
| 6 | ಕಂಡಿಕೆ 5 ರಲ್ಲಿ ವಿವರಿಸಿದಂತೆ ಜಿಲ್ಲಾ ಚುನಾವಣಾಧಿಕಾರಿಯು ಅಧಿಸೂಚನೆ ಹೊರಡಿಸಿದ ನಂತರ ಉದ್ದೇಶಿತ ಚುನಾವಣೆಗಾಗಿ ರಿಟರ್ನಿಂಗ್ ಅಧಿಕಾರಿ ನಮೂನೆ XII ರಲ್ಲಿ ಸಾರ್ವಜನಿಕ ನೋಟೀಸ್ ನೀಡುವಿಕೆ. | ನಿಯಮ 14 (3) ರಂತೆ ರಿಟರ್ನಿಂಗ್ ಅಧಿಕಾರಿಯು ಅಗತ್ಯ ಕ್ರಮವಿಡುವ ಬಗ್ಗೆ ನಿರ್ದೇಶಿಸುವುದು. |
| 7 | ಫೆಡರಲ್ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಪದಾಧಿಕಾರಿಗಳ ಮೊದಲ 2 1/2 ವರ್ಷದ ಅವಧಿ ಮುಗಿದಿರುವ / ಮುಗಿಯಲಿರುವ ಪ್ರಕರಣಗಳು ಕಂಡು ಬಂದಲ್ಲಿ 2ನೇ ಎರಡೂವರೆ ವರ್ಷದ ಅವಧಿಗೆ ಚುನಾವಣೆ ನಡೆಸಲು ಬಾಕಿ ಇರುವ ಸಂಘಗಳ ಬಗ್ಗೆ ಪರಿಶೀಲಿಸಿ ರಿಟರ್ನಿಂಗ್ ಅಧಿಕಾರಿ ನೇಮಕಾತಿ ಅವಶ್ಯಕತೆ ಇದ್ದಲ್ಲಿ ವಿವರಗಳೊಡನೆ ವರದಿ ಸಲ್ಲಿಸುವುದು. | ಈ ವಿಷಯದ ಬಗ್ಗೆ ಜಿಲ್ಲಾವಾರು ಮಾಹಿತಿ ಪಡೆದು ಆಯೋಗಕ್ಕೆ ಕಳುಹಿಸಿಕೊಡಲು ಕೂಡಲೇ ಅಗತ್ಯ ಕ್ರಮವಿಡುವುದು. |
| 8 | ಆಕಸ್ಮಿಕ ತೆರವಾದ ನಿರ್ದೇಶಕರ /ಪದಾಧಿಕಾರಿಗಳ ಚುನಾವಣೆ. | ಇಂತಹ ಪ್ರಕರಣಗಳಿದ್ದಲ್ಲಿ ಪರಿಶೀಲಿಸಿ ರಿಟರ್ನಿಂಗ್ ಆಫೀಸರ್ ನೇಮಕಾತಿಗೆ ಅಗತ್ಯ ಕ್ರಮ ಕೈಗೊಂಡು ಆಯೋಗಕ್ಕೆ ವರದಿ ಸಲ್ಲಿಸುವುದು. |
| 9 | ಮತದಾನ ಕೇಂದ್ರಗಳನ್ನು ಗುರುತಿಸುವಿಕೆ ಮತ್ತು ಅದರ ವಿವರಗಳು | ರಿಟರ್ನಿಂಗ್ ಅಧಿಕಾರಿಯು, ಡಿ.ಇ.ಓ ರವರೊಡನೆ ಸಮಾಲೋಚಿಸಿ ಸೂಕ್ತವಾದ ಮತದಾನ ಕೇಂದ್ರಗಳನ್ನು ಸ್ಥಾಪಿಸಲು ವ್ಯವಸ್ಥೆ ಮಾಡುವುದು. |
| 10 | ಮತದಾನ ಸಿಬ್ಬಂದಿ ನೇಮಕಾತಿ | ಕರ್ನಾಟಕ ಸಹಕಾರ ಸಂಘಗಳ ನಿಯಮ 13(ಎಫ್)ನ ಅವಕಾಶದಂತೆ ಜಿಲ್ಲಾ ಚುನಾವಣಾಧಿಕಾರಿಯು ಪ್ರತಿಯೊಂದು ಮತದಾನ ಕೇಂದ್ರಕ್ಕಾಗಿ ಒಬ್ಬ ಅಧ್ಯಕ್ಷಾಧಿಕಾರಿಯನ್ನು ಮತ್ತು ತಾನು ಅವಶ್ಯವೆಂದು ಭಾವಿಸುವಂಥ ಮತದಾನ ಅಧಿಕಾರಿ ಅಥವಾ ಪೋಲಿಂಗ್ ಅಧಿಕಾರಿಗಳನ್ನು ನೇಮಕ ಮಾಡಬಹುದು. |
| 11 | ಚುನಾವಣೆ ನಡೆಸುವ ಸಂಬಂಧ ಅಧಿಕಾರಿ / ಚುನಾವಣಾ ಸಿಬ್ಬಂದಿಗಳಿಗೆ ತರಬೇತಿ ವ್ಯವಸ್ಥೆ | ಆಯೋಗವು ಈಗಾಗಲೇ ಚುನಾವಣಾ ಕೈಪಿಡಿಯನ್ನು ಒದಗಿಸಿದೆ. ಅಧಿನಿಯಮ / ನಿಯಮಗಳು /ಬೈಲಾ ಅವಕಾಶಗಳ ಸಂಬಂಧ ಸಿಬ್ಬಂದಿಗೆ ಸೂಕ್ತ ತಿಳುವಳಿಕೆ ನೀಡಲು ತರಬೇತಿಗೆ ಅಗತ್ಯ ವ್ಯವಸ್ಥೆ ಮಾಡುವುದು. |

-------3

| | | |
|---|---|---|
| 12 | ಚುನಾವಣಾ ಫಲಿತಾಂಶ ಘೋಷಣೆ ಮತ್ತು ಸಹಕಾರ ಚುನಾವಣಾ ಆಯೋಗಕ್ಕೆ ರಿಟರ್ನ್‌ಗಳನ್ನು ಸಲ್ಲಿಸುವುದು. | ನಿಯಮ 14ವೈ(2) ರನ್ವಯ ರಿಟರ್ನಿಂಗ್ ಅಧಿಕಾರಿ ಕ್ರಮವಿಡುವ ಕುರಿತು ಸೂಚಿಸುವುದು. |
| 13 | ಮತಪೆಟ್ಟಿಗೆಗಳ ಮತ್ತು ಚುನಾವಣೆಗೆ ಸಂಬಂಧಪಟ್ಟ ಕಾಗದಪತ್ರಗಳ ಅಭಿರಕ್ಷೆ, ಪರಿವೀಕ್ಷಣೆ ಮತ್ತು ಹಾಜರುಪಡಿಸುವಿಕೆ, ಹಾಗೂ ವಿಲೇವಾರಿ | ನಿಯಮ 14ಎಬಿ ಮತ್ತು ನಿಯಮ 14ಎಸಿ ಹಾಗೂ 14ಎಡಿ ಗಳ ಅವಕಾಶದಂತೆ ಹಾಗೂ ಸಹಕಾರ ಚುನಾವಣಾ ಆಯೋಗವು ನಿರ್ದೇಶಿಸಿರುವಂತೆ ಕ್ರಮವಿಡುವಂತೆ ನೋಡಿಕೊಳ್ಳುವುದು. |
| 14 | ಪದಾಧಿಕಾರಿಗಳ ಚುನಾವಣೆ | ನಿಯಮ ಕರ್ನಾಟಕ ಸಹಕಾರ ಸಂಘಗಳ ನಿಯಮ 14ಎಜಿ ದ ಅವಕಾಶದಂತೆ ಕ್ರಮವಿಡುವುದು. |
| 15 | ಮಾದರಿ ನೀತಿ ಸಂಹಿತೆ | ಆಯೋಗವು ಈಗಾಗಲೇ ಹೊರಡಿಸಿರುವ ನೀತಿ ಸಂಹಿತೆ ಪಾಲನೆ ಬಗ್ಗೆ ಅಗತ್ಯ ಕ್ರಮವಿಡುವುದು. |

(ಎನ್.ಸಿ. ಮುನಿಯಪ್ಪ)
**ಸಹಕಾರ ಚುನಾವಣಾ ಆಯುಕ್ತರು**
**ಬೆಂಗಳೂರು**